**All India Radio: Bangalore**
**National Bulletin In Kannada**
**14.07.2025  07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲ ಸೇರಿ ನಾಲ್ವರು ಎಕ್ಸಿಯಂ-೪ ಮಿಷನ್ ಸಿಬ್ಬಂದಿ ಇಂದು ಭೂಮಿಗೆ ಮರಳಿ ಪ್ರಯಾಣ
2. ಎಸ್‌ಸಿಒ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಇಂದಿನಿಂದ ಚೀನಾ ಪ್ರವಾಸ
3. ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಕರ್ನಾಟಕ ಪ್ರವಾಸ ; ಶಿವಮೊಗ್ಗದಲ್ಲಿ ೪೨೩ ಕೋಟಿ ವೆಚ್ಚದ ಸೇತುವೆ ಲೋಕಾರ್ಪಣೆ
4. ಚೊಚ್ಚಲ ವಿಂಬಲ್ಡನ್ ಗ್ರಾನ್ ಸ್ಲ್ಯಾಮ್ ಪ್ರಶಸ್ತಿ ಮುಡಿಗೇರಿಸಿಕೊಂಡ ಇಟಲಿಯ ಯಾನಿಕ್ ಸಿನ್ನರ್
5. ಫಿಬಾ ಮಹಿಳಾ ಏಷ್ಯಾ ಕಪ್ ಬ್ಯಾಸ್ಕೆಟ್ ಬಾಲ್ ಟೂರ್ನಿ: ಕಜಕಿಸ್ತಾನ್ ವಿರುದ್ಧ ಭಾರತಕ್ಕೆ ಜಯ

<><><><>

ಭಾರತೀಯ ಗಗನಯಾತ್ರಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಹಾಗೂ ಅಕ್ಸಿಯಮ್-೪ ಮಿಷನ್‌ನ ಮೂವರು ಇತರ ಸಿಬ್ಬಂದಿ ಇಂದು ಮರಳಿ ಭೂಮಿಗೆ ಪ್ರಯಾಣ ಬೆಳೆಸಲಿದ್ದಾರೆ. ಅವರು ನಾಳೆ ಮಧ್ಯಾಹ್ನ ೩ ಗಂಟೆ ಸುಮಾರಿಗೆ ಭೂಮಿಗೆ ಮರಳಲಿದ್ದಾರೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ತಮ್ಮ ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಸಚಿವರು, ಭಾರತೀಯ ಕಾಲಮಾನ ಇಂದು ಸಂಜೆ ೪:೩೦ ಕ್ಕೆ ಅನ್‌ಡಾಕ್ ಮಾಡುವ ಕಾರ್ಯವನ್ನು ಯೋಜಿಸಲಾಗಿದೆ ಎಂದು ಹೇಳಿದ್ದಾರೆ. ಭೂಮಿಗೆ ಮರಳಿದ ನಂತರ, ಗ್ರೂಪ್ ಕ್ಯಾಪ್ಟನ್ ಶುಕ್ಲಾ ಮತ್ತು ಇತರ ಸಿಬ್ಬಂದಿ, ಭೂಮಿಯ ಗುರುತ್ವಾಕರ್ಷಣೆಗೆ ಪುನಃ ಹೊಂದಿಕೊಳ್ಳುವ ಸಲುವಾಗಿ 'ಫ್ಲೈಟ್ ಸರ್ಜನ್'ಗಳ ಮೇಲ್ವಿಚಾರಣೆಯಲ್ಲಿ ೭ ದಿನಗಳ ಪುನಶ್ಚೇತನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಗ್ರೂಪ್ ಕ್ಯಾಪ್ಟನ್ ಶುಕ್ಲಾ ಅವರು ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರಕ್ಕೆ ೧೪ ದಿನಗಳ ಯೋಜನೆಯಲ್ಲಿ ಪಾಲ್ಗೊಂಡಿದ್ದಾರೆ. ಅವರು ಬಾಹ್ಯಾಕಾಶಕ್ಕೆ ಪ್ರಯಾಣಿಸಿದ ಎರಡನೇ ಭಾರತೀಯರಾಗಿದ್ದು, ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರಕ್ಕೆ ಭೇಟಿ ನೀಡಿದ ಮೊದಲ ಭಾರತೀಯರಾಗಿದ್ದಾರೆ.

ಗ್ರೂಪ್ ಕ್ಯಾಪ್ಟನ್ ಶುಕ್ಲಾ ಅವರು ಭಾರತಕ್ಕೆ ಸಂಬಂಧಿಸಿದ ಏಳು ವೈಜ್ಞಾನಿಕ ಪ್ರಯೋಗಗಳನ್ನು ನಡೆಸಿದ್ದಾರೆ. ತಮ್ಮ ಪ್ರಯಾಣದ ಕುರಿತು ಮಾತನಾಡಿರುವ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲ ಅಂತಾರಾಷ್ಟ್ರಿಯ ಬಾಹ್ಯಾಕಾಶ ನಿಲ್ದಾಣದಲ್ಲಿ ಕಳೆದ ೨ ವಾರಗಳಲ್ಲಿ ಹಲವು ಪ್ರಯೋಗಗಳನ್ನು ನಡೆಸಲಾಗಿದೆ. ಇದೊಂದು ಅದ್ಭುತ ಪಯಣವಾಗಿದ್ದು, ಇದರ ಯಶಸ್ಸಿಗೆ ತಮ್ಮ ತಂಡದಲ್ಲಿರುವ ಎಲ್ಲರೂ ಕಾರಣೀಭೂತರಾಗಿದ್ದಾರೆ.

<><><><>

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಇಂದು ೨ ದಿನಗಳ ಅಧಿಕೃತ ಭೇಟಿಗಾಗಿ ಚೀನಾಕ್ಕೆ ಪ್ರವಾಸ ಕೈಗೊಳ್ಳಲಿದ್ದಾರೆ.

ನಾಳೆ ಅವರು ಟಿಯಾಂಜಿನ್ ನಗರದಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆ-ಎಸ್‌ಸಿಒ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಸಭೆಯಲ್ಲಿ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರು ವಿವಿಧ ಕ್ಷೇತ್ರಗಳಲ್ಲಿ ಎಸ್‌ಸಿಒ ಸಹಕಾರ ಮತ್ತು ಪ್ರಮುಖ ಅಂತಾರಾಷ್ಟ್ರೀಯ ಹಾಗೂ ಪ್ರಾದೇಶಿಕ ವಿಷಯಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ. ಎಸ್‌ಸಿಒ ಒಕ್ಕೂಟದಲ್ಲಿ ಭಾರತ, ಚೀನಾ, ರಷ್ಯಾ, ಇರಾನ್, ಕಜಾಕಿಸ್ಥಾನ್, ಕಿರ್ಗಿಸ್ಥಾನ್, ಪಾಕಿಸ್ತಾನ, ತಜಾಕಿಸ್ತಾನ್, ಉಜ್ಬೆಕಿಸ್ತಾನ್ ಮತ್ತು ಬೆಲಾರಸ್ ಸೇರಿದಂತೆ ೧೦ ಸದಸ್ಯ ರಾಷ್ಟ್ರಗಳಿವೆ. ಪ್ರಸ್ತುತ ಚೀನಾ ಎಸ್‌ಸಿಒದ ಅಧ್ಯಕ್ಷತೆ ವಹಿಸಿದ್ದು, ಈ ಸಭೆಗಳ ಆತಿಥ್ಯ ವಹಿಸಿದೆ. ಎಸ್‌ಸಿಒ ವಿದೇಶಾಂಗ ಸಚಿವರ ಸಭೆಯ ನೇಪಥ್ಯದಲ್ಲಿ ಸಚಿವ ಡಾ. ಜೈಶಂಕರ್ ಹಲವು ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಈ ಭೇಟಿಯ ವೇಳೆ ಅವರು ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ಅವರನ್ನು ಭೇಟಿಯಾಗಿ, ಭಾರತ-ಚೀನಾ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಸಾಮಾನ್ಯ ಸ್ಥಿತಿಗೆ ತರುವ ಮತ್ತು ಹಲವು ದಶಕಗಳ ಗಡಿ ಸಮಸ್ಯೆಗೂ ಪರಿಹಾರ ಕಂಡುಕೊಳ್ಳುವ ಕುರಿತು ಚರ್ಚೆ ನಡೆಸುವ ಸಾಧ್ಯತೆ ಇದೆ. ೨೦೨೦ರ ಲಡಾಖ್ ಗಡಿಭಾಗದ ಸೇನಾ ಸಂಘರ್ಷದ ಸಮಯದಲ್ಲಿ ಭಾರತ-ಚೀನಾ ಸಂಬಂಧಗಳು ಉದ್ವಿಗ್ನಗೊಂಡ ಬಳಿಕ, ಡಾ. ಜೈಶಂಕರ್ ಚೀನಾಕ್ಕೆ ಕೈಗೊಳ್ಳುತ್ತಿರುವ ಮೊದಲ ಭೇಟಿ ಇದಾಗಿದೆ.

<><><><>

ಕರ್ನಾಟಕದ ಶಿವಮೊಗ್ಗ ಶರಾವತಿ ನದಿಯ ಹಿನ್ನೀರಿನಲ್ಲಿ ನಿರ್ಮಿಸಲಾಗಿರುವ ಸಿಗಂದೂರು ಸೇತುವೆಯನ್ನು ಇಂದು ಕೇಂದ್ರ ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಲೋಕಾರ್ಪಣೆಗೊಳಿಸಲಿದ್ದಾರೆ. ಸುಮಾರು ೪೨೩ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಈ ಸೇತುವೆಯು, ಕರ್ನಾಟಕದ ಅತಿ ಉದ್ದದ ಒಳನಾಡು ಕೇಬಲ್-ಸ್ಟೇಯ್ಡ್ ಸೇತುವೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಆರು ದಶಕಗಳಿಂದ ಸಾಗರ ತಾಲೂಕಿನ ಶರಾವತಿಯ ಹಿನ್ನೀರಿನ ೪೦ಕ್ಕೂ ಹೆಚ್ಚು ಗ್ರಾಮಗಳ ಜನ ೬೦ ವರ್ಷಗಳಿಂದ ಈ ಸೇತುವೆಗಾಗಿ ಕಾಯುತ್ತಿದ್ದರು. ಈ ಭಾಗದ ಅನೇಕ ಹಳ್ಳಿಗಳಿಗೆ ಲಾಂಚ್‌ಗಳೇ ಸಂಪರ್ಕ ವ್ಯವಸ್ಥೆಯಾಗಿತ್ತು. ಪ್ರತಿ ದಿನಸಂಜೆ ನಂತರ ಈ ಗ್ರಾಮಗಳಿಗೆ ಸಂಪರ್ಕ ಇರಲಿಲ್ಲ. ಸಾಗರ ತಾಲೂಕಿನ ಅಂಬಾರಗೋಡ್ಲು-ಕಳಸವಳ್ಳಿ ಸಂಪರ್ಕ ಕಲ್ಪಿಸುವ ಶರಾವತಿ ಸೇತುವೆ ಶಂಕುಸ್ಥಾಪನೆಯನ್ನು ೨೦೧೮ರಲ್ಲಿ ಕೇಂದ್ರ ಸಚಿವ ನಿತಿನ್ ಗಡ್ಕರಿ ಮಾಡಿದ್ದರು. ಶರಾವತಿ ಸೇತುವೆಯ ಲೋಕಾರ್ಪಣೆ ಬಳಿಕ ಸಾಗರದ ನೆಹರು ಮೈದಾನದಲ್ಲಿ ನಡೆಯುವ ಸಾರ್ವಜನಿಕ ಸಭೆಯಲ್ಲಿ ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಮಂಜೂರಾಗಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಕೇಂದ್ರ ಸಚಿವ ಗಡ್ಕರಿ ಅವರು ಚಾಲನೆ ನೀಡಲಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಒಡಿಶಾದ ಭುವನೇಶ್ವರ ಮತ್ತು ಕಟಕ್‌ಗೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಭುವನೇಶ್ವರದ ಏಮ್ಸ್‌ನ ೫ನೇ ಘಟಿಕೋತ್ಸವ ಸಮಾರಂಭದಲ್ಲಿ ಅವರು ಭಾಗವಹಿಸಲಿದ್ದಾರೆ. ನಾಳೆ ಕಟಕ್‌ನಲ್ಲಿರುವ ರಾವೆನ್‌ಶಾ ವಿಶ್ವವಿದ್ಯಾಲಯದ ೧೩ನೇ ಘಟಿಕೋತ್ಸವದಲ್ಲಿ ರಾಷ್ಟ್ರಪತಿಯವರು ಪಾಲ್ಗೊಳ್ಳಲಿದ್ದಾರೆ. ಇದೇ ವೇಳೆ ರಾವೆನ್‌ಶಾ ಬಾಲಕಿಯರ ಪ್ರೌಢಶಾಲೆಯ ಮೂರು ಕಟ್ಟಡಗಳ ಪುನರಾಭಿವೃದ್ಧಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ನಂತರ ಅವರು, ಆದಿಕವಿ ಸರಳದಾಸ್ ಅವರ ಜನ್ಮ ದಿನಾಚರಣೆಯಲ್ಲಿ ಭಾಗವಹಿಸಿ ಕಾಳಿಂಗರತ್ನ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

<><><><>

ಆಪರೇಷನ್ ಸಿಂದೂರ್ ಸಮಯದಲ್ಲಿ ಬ್ರಹ್ಮೋಸ್ ಕ್ಷಿಪಣಿ ಗಮನಾರ್ಹವಾಗಿ ಕಾರ್ಯನಿರ್ವಹಿಸಿದೆ. ಆಪರೇಷನ್ ಸಿಂದೂರ್ ನಂತರ ವಿದೇಶಗಳಲ್ಲಿ ಬ್ರಹ್ಮೋಸ್ ಕ್ಷಿಪಣಿಗಳಿಗೆ ಬೇಡಿಕೆ ಹೆಚ್ಚಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಉತ್ತರಪ್ರದೇಶದ ತಮ್ಮ ಸಂಸದೀಯ ಕ್ಷೇತ್ರ ಲಖನೌಗೆ ಎರಡು ದಿನಗಳ ಭೇಟಿಯಲ್ಲಿರುವ ಅವರು, ನಿನ್ನೆ ರಾಷ್ಟ್ರೀಯ ಪಿಜಿ ಕಾಲೇಜಿನಲ್ಲಿ ಉತ್ತರಪ್ರದೇಶ ಮಾಜಿ ಮುಖ್ಯಮಂತ್ರಿ ಚಂದ್ರಬಾಬು ಗುಪ್ತಾ ಅವರ ಪ್ರತಿಮೆ ಅನಾವರಣಗೊಳಿಸಿದರು. ಈ ವೇಳೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ೧೪ ದೇಶಗಳು ಬ್ರಹ್ಮೋಸ್ ಕ್ಷಿಪಣಿಗಾಗಿ ಬೇಡಿಕೆ ಇಟ್ಟಿವೆ. ಲಖನೌದಲ್ಲಿ ತಯಾರಿಸಲಾದ ಬ್ರಹ್ಮೋಸ್ ಕ್ಷಿಪಣಿಗಳನ್ನು ಈ ದೇಶಗಳಿಗೆ ರವಾನಿಸಲಾಗುವುದು. ಅಲ್ಲದೇ ಇದು ರಾಜ್ಯದಲ್ಲಿ ಉದ್ಯೋಗ ಹೆಚ್ಚಿಸಲು ಸಹಾಯ ಮಾಡುತ್ತದೆ ಎಂದರು.

<><><>

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ರಸಾಯನಿಕಗಳು ಮತ್ತು ರಸಗೊಬ್ಬರಗಳ ಸಚಿವ ಜೆ.ಪಿ. ನಡ್ಡಾ ಸೌದಿ ಅರೇಬಿಯಾಕ್ಕೆ ಜುಲೈ ೧೧ರಿಂದ ೧೩ರ ವರೆಗೆ ಕೈಗೊಂಡಿದ್ದ ಮೂರು ದಿನಗಳ ಭೇಟಿಯನ್ನು ಯಶಸ್ವಿಯಾಗಿ ಸಂಪನ್ನಗೊಳಿಸಿದ್ದಾರೆ. ಈ ವೇಳೆ, ಭಾರತ-ಸೌದಿ ಸಂಬಂಧ ಬಲಪಡಿಸುವ ಪ್ರಮುಖ ರಸಗೊಬ್ಬರ ಒಪ್ಪಂದಗಳಿಗೆ ಸಹಿ ಹಾಕಲಾಗಿದೆ. ಕೃಷಿ ಉತ್ಪಾದಕತೆ ಮತ್ತು ಸುಸ್ಥಿರತೆಯನ್ನು ಉತ್ತೇಜಿಸುವ ದಿಟ್ಟ ಗುರಿಯೊಂದಿಗೆ ಸಂಶೋಧನೆ ಮತ್ತು ಪರ್ಯಾಯ ರಸಗೊಬ್ಬರ ಅಭಿವೃದ್ಧಿಯಲ್ಲಿ ಸಹಯೋಗ ಸಾಧಿಸಲು ಒಂದು ಸಂಯುಕ್ತ ತಂಡವನ್ನು ರಚಿಸಲಾಗಿದೆ. ಈ ಭೇಟಿಯಿಂದ ಎರಡು ದೇಶಗಳ ನಡುವಿನ ಆರ್ಥಿಕ ಸಹಕಾರ ಮತ್ತಷ್ಟು ಬಲಪಡಿಸಲಾಗಿದೆ.

<><><>

ಲಂಡನ್‌ನ ಆಲ್ ಇಂಗ್ಲೆಂಡ್ ಕ್ಲಬ್‌ನಲ್ಲಿ ಕಳೆದ ರಾತ್ರಿ ನಡೆದ ವಿಂಬಲ್ಡನ್ -೨೦೨೫ ಗ್ರ್ಯಾಂಡ್ ಸ್ಲ್ಯಾಮ್ ಟೆನಿಸ್ ಟೂರ್ನಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಫೈನಲ್ ಪಂದ್ಯದಲ್ಲಿ ವಿಶ್ವ ಅಗ್ರ ಶ್ರೇಯಾಂಕಿತ ಇಟಲಿಯ ಯಾನಿಕ್ ಸಿನ್ನರ್, ಸ್ಪೇನ್‌ನ ಕಾರ್ಲೋಸ್ ಅಲ್ಕರಾಜ್ ವಿರುದ್ಧ ಗೆಲುವು ಸಾಧಿಸಿ ತಮ್ಮ ಚೊಚ್ಚಲ ವಿಂಬಲ್ಡನ್ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ. ನಿನ್ನೆ ನಡೆದ ಪಂದ್ಯದಲ್ಲಿ ಸಿನ್ನರ್, ಅಲ್ಕರಾಜ್ ವಿರುದ್ಧ ೪-೬, ೬-೪, ೬-೪, ೬-೪ ಅಂತರದಲ್ಲಿ ಗೆಲುವು ಸಾಧಿಸಿದರು. ಆ ಮೂಲಕ ಟೂರ್ನಿಯ ೧೪೮ ವರ್ಷಗಳ ಇತಿಹಾಸದಲ್ಲಿ ವಿಂಬಲ್ಡನ್ ಪ್ರಶಸ್ತಿ ಗೆದ್ದ ಮೊದಲ ಇಟಲಿ ಪುರುಷ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಇದು ಸಿನ್ನರ್ ಅವರ ಒಟ್ಟಾರೆ ೪ನೇ ಗ್ರ್ಯಾಂಡ್ ಸ್ಲ್ಯಾಮ್ ಪ್ರಶಸ್ತಿಯಾಗಿದೆ.

<><><>

ಚೀನದಲ್ಲಿ ನಡೆಯುತ್ತಿರುವ ಫಿಬಾ ಮಹಿಳಾ ಏಷ್ಯ ಕಪ್ -೨೦೨೫ ಬಿ ವಿಭಾಗದ ಬ್ಯಾಸ್ಕೆಟ್ ಬಾಲ್ ಪಂದ್ಯಾವಳಿಯ ಎ ಗುಂಪಿನ ತನ್ನ ಮೊದಲ ಪಂದ್ಯದಲ್ಲಿ ಭಾರತದ ವನಿತೆಯರ ತಂಡ ಕಜಕಿಸ್ತಾನ್ ವಿರುದ್ಧ ೮೫-೬೮ ಅಂಕಗಳ ಅಂತರದಲ್ಲಿ ಗೆಲುವು ಸಾಧಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>